# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **2890** |
| ಉತ್ತರಿಸಬೇಕಾದ ದಿನಾಂಕ | : | 30.03.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಕೊಳಚೆ ಪ್ರದೇಶಗಳಿವೆ ; | ಕೋಲಾರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 13 ಘೋಷಿತ ಕೊಳಚೆ ಪ್ರದೇಶಗಳು ಇರುತ್ತವೆ. |
| ಆ) | ಕೊಳಚೆ ಪ್ರದೇಶಗಳನ್ನು ಗುರುತಿಸಿದ್ದರೆ, ಸದರಿ ನಿವಾಸಿಗಳಿಗೆ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆ ; | ಮಂಡಳಿಯ ಕಾಯಿದೆ ಪ್ರಕಾರ ಘೋಷಿತ ಕೊಳಚೆ ಪ್ರದೇಶಗಳಲ್ಲಿ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ, ಯು.ಜಿ.ಡಿ., ಸಮುದಾಯ ಭವನಗಳನ್ನು ನಿರ್ಮಿಸಲಾಗುತ್ತಿದೆ. ಆದರೆ ಗುರುತಿಸಿರುವ/ ಘೋಷಣೆ ಆಗದೇ ಇರುವ ಕೊಳಚೆ ಪ್ರದೇಶಗಳಲ್ಲಿ ಮೂಲ ಸೌಲಭ್ಯಗಳನ್ನು ಒದಗಿಸಲು ಅವಕಾಶವಿರುವುದಿಲ್ಲ. |
| ಇ) | ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಇವರ ವಾಸ್ತವ್ಯಕ್ಕೆ ಉಚಿತ ಮನೆಗಳನ್ನು ನಿರ್ಮಾಣ ಮಾಡಿ, ಅಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ನೀಡುವ ಉದ್ದೇಶ ಸರ್ಕಾರಕ್ಕಿದೆಯೇ ; | ಮಂಡಳಿಯಲ್ಲಿ ಕೊಳಗೇರಿ ನಿವಾಸಿಗಳ ವಾಸ್ತವ್ಯಕ್ಕೆ ಉಚಿತ ಮನೆಗಳನ್ನು ನಿರ್ಮಿಸುವ ಯಾವುದೇ ಯೋಜನೆ ಇರುವುದಿಲ್ಲ. ಆದರೆ ಘೋಷಿತ ಪ್ರದೇಶಗಳಲ್ಲಿ ಕಚ್ಚಾ/ ಅರೇ ಪಕ್ಕಾ ಮನೆಗಳಲ್ಲಿ ವಾಸವಾಗಿದ್ದವರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಾಯಧನ ಹಾಗೂ ಫಲಾನುಭವಿಗಳವಂತಿಕೆಯೊಂದಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ)ರಡಿ ಮನೆಗಳನ್ನು ನಿರ್ಮಿಸುವ ಯೋಜನೆ ಜಾರಿಯಲ್ಲಿದೆ. |
| ಈ) | ಇದ್ದಲ್ಲಿ, ಅದರ ರೂಪುರೇಷಗಳೇನು ; ಅದನ್ನು ಯಾವ ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾಗುವುದು ? | ಮಂಡಳಿಯಲ್ಲಿ ರಾಜ್ಯ ಸರ್ಕಾರದ ವಾಜಪೇಯಿ ವಸತಿ ಯೋಜನೆ ಮತ್ತು ಡಾ\|\| ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಗಳನ್ನು ಸಮನ್ವಯಗೊಳಿಸಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)ರಡಿ ಕೊಳಗೇರಿ ನಿವಾಸಿಗಳಿಗೆ ಮನೆಗಳನ್ನು ನಿರ್ಮಿಸಲಾಗುತ್ತಿದೆ. ಸದರಿ ಯೋಜನೆಯಡಿ ಪ್ರತಿ ಮನೆಯ ಘಟಕ ವೆಚ್ಚ ಸುಮಾರು 5 ಲಕ್ಷಗಳಿದ್ದು, ಅದರಲ್ಲಿ ಕೇಂದ್ರ ಸರ್ಕಾರದ ಸಹಾಯ ಧನ ರೂ.1.50 ಲಕ್ಷಗಳು, ರಾಜ್ಯ ಸರ್ಕಾರದ ಸಹಾಯ ಧನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರಿಗೆ ರೂ.2.00 ಲಕ್ಷ, ಸಾಮಾನ್ಯ ವರ್ಗದವರಿಗೆ ರೂ.1.20 ಲಕ್ಷಗಳಾಗಿದ್ದು, ಉಳಿದ ಮೊತ್ತವನ್ನು ಫಲಾನುಭವಿಗಳು ವಂತಿಕೆ/ಸಾಲದ ರೂಪದಲ್ಲಿ ಭರಿಸಬೇಕಾಗಿರುತ್ತದೆ. |

ಸಂಖ್ಯೆ :ವಇ 67 ಎಸ್‌ಬಿಎಂ 2022

**(ವಿ. ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು